**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಮುಳಬಾಗಿಲು.**

ಸಿ.ಸಿ.ನಂಃ **1922/2024**

ಪಿರ್ಯಾದುದಾರರುಃ     ನಂಗಲಿ ಪೊಲೀಸ್ ಠಾಣೆ, ಮುಳಬಾಗಿಲು

ವಿರುದ್ಧ

ಆರೋಪಿಃ     ಯಾರಬ್

ಆಪಾದನೆ

ನಾನು ಶ್ರೀಮತಿ ಸ್ನೇಹಾ ಎಂ., ಬಿ.ಎ.,ಎಲ್ ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಮುಳಬಾಗಿಲು ನಿಮ್ಮನ್ನು ಅಂದರೆಃ–

ಶ್ರೀ. ಯಾರಬ್, ಬಿನ್ ಖಾದರ್ ವಲ್ಲಿ,24 ವರ್ಷ,
ವಾಸಃ ಚಿತ್ತೂರು, ಆಂಧ್ರಪ್ರದೇಶ್

**ಈ ಕೆಳಕಂಡಂತೆ ಆಪಾದನೆ ಗುರಿಪಡಿಸುತ್ತಿದ್ದೇನೆಃ**

ದಿನಾಂಕಃ 02.11.2023 ರಂದು ಬೆಳಿಗ್ಗೆ 6.30 ಗಂಟೆ ಸಮಯದಲ್ಲಿ ಮುಳಬಾಗಿಲು ತಾಲ್ಲೂಕಿನ ಶ್ರೀ ವರ್ಷಾ ಡಾಬಾದ ರಸ್ತೆಯ ಬಳಿ ಮೃತ ವೆಂಕಟೇಶಪ್ಪ ರವರು ಕೆಎ –05–ಇಕ್ಯೂ –1955 ದ್ವಿ ಚಕ್ರ ವಾಹನದಲ್ಲಿ ಹೋಗುತ್ತಿರುವಾಗ ಆರೋಪಿಯಾದ ನೀವು ಎಪಿ–09–ಯುಕೆ–9679 ಅಶೋಕ್ ಲೇಲ್ಯಾಂಡ್ ವಾಹನವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಮೃತ ವೆಂಕಟೇಶಪ್ಪ ರವರ ವಾಹನಕ್ಕೆ ಹಿಂಬದಿಯಿಂದ ಡಿಕ್ಕಿ ಪಡಿಸಿ ಅಪಘಾತವನ್ನುಂಟು ಮಾಡಿರುತ್ತೀರಿ, ಇದರಿಂದ ನೀವು ಭಾರತೀಯ ದಂಡ ಸಂಹಿತೆ ಕಲಂ 279 ರನ್ವಯ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

2 ನೇಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಸದರಿ ವಾಹವನ್ನು ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಅಪಘಾತಪಡಿಸಿದ ಪರಿಣಾಮ ವೆಂಕಟೇಶಪ್ಪ ರವರು ರಸ್ತೆಯ ಮೇಲೆ ಬಿದ್ದು ತಲೆಗೆ ತೀವ್ರ ಸ್ವರೂಪದ ರಕ್ತ ಗಾಯವಾಗಿದ್ದು ಆತನನ್ನು ಚಿಕಿತ್ಸೆಗಾಗಿ ಕೋಲಾರ ಆರ್.ಎಲ್.ಜಾಲಪ್ಪ ಆಸ್ಪತ್ರೆಗೆ ದಾಖಲಿಸಿದ್ದು ಅಲ್ಲಿ ಚಿಕಿತ್ಸೆ ಪಡೆದರೂ ಗುಣಮುಖರಾಗದೆ ದಿನಾಂಕಃ 13.12.2023 ರಂದು ಸಂಜೆ 6.00 ಗಂಟೆ ಸಮಯದಲ್ಲಿ ಮೃತಪಟ್ಟಿರುತ್ತಾರೆ. ಆದ್ದರಿಂದ ನೀವು ಭಾರತೀಯ ದಂಡ ಸಂಹಿತೆ ಕಲಂ 304(ಎ) ರನ್ವಯ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞಾನದಲ್ಲಿ ಎಸಗಿರುತ್ತೀರಿ.

(ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿಗೆ ಓದಿ ಹೇಳಿ ವಿವರಿಸಿದಾಗ ಅವರು ನೀಡಿದ ಉತ್ತರವನ್ನು ಸಂಪೂರ್ಣವಾಗಿ ಮತ್ತು ಯಥಾವತ್ತಾಗಿ ದಾಖಲಿಸಿರುತ್ತೇನೆಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ 04 ನೇ ಅಕ್ಟೋಬರ್ –2024.

ಸಹಿ/-
(ಶ್ರೀಮತಿ ಸ್ನೇಹಾ ಎಂ.)
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ., ಮುಳಬಾಗಿಲು.